# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

176

## ವಾರ್ಡ್ -144ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಸ ವಾರ್ಡ್ ಸಂಖ್ಯೆ: 176–ಸೋಮೇಶ್ವರನಗರ (ಹಳೆ ವಾರ್ಡ್–144) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ಪ್ರದೀಪ್‌ಕುಮಾರ್ ಎನ್., ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ಹಾಗೂ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:03/09/2022 ರಂದು ಸೋಮವಾರದಂದು ಬೆಳಗ್ಗೆ 10.30 ರಿಂದ 12.00 ರವರೆಗೆ ವಾರ್ಡ್ ಕಮಿಟಿ ಸಭೆಯನ್ನು ಟಿ. ಮರಿಯಪ್ಪ ರಸ್ತೆಯಲ್ಲಿರುವ ವಾರ್ಡ್ ಕಛೇರಿ ಸಭಾಂಗಣದಲ್ಲಿ ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀ. ಪ್ರದೀಪ್‌ಕುಮಾರ್ ಎನ್, ಸ.ಕಾ.ನಿ.ಅ (ಕೆ.ಗೌ.ನ) ಹಾಗೂ ನೋಡಲ್ ಅಧಿಕಾರಿ.
2. ಶ್ರೀ. ಆರ್. ಕೊಟ್ರೇಶ್ ನಾಯಕ್, ಸಹಾಯಕ ಅಭಿಯಂತರರು, ವಾರ್ಡ್–144.
3. ಶ್ರೀ. ರವೀಂದ್ರ ಹಿಜೇರಿ, ಹಿರಿಯ ಆರೋಗ್ಯ ಪರಿವೀಕ್ಷಕರು.
4. ಶ್ರೀಮತಿ. ಸುರೇಖ ಆರ್. ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–144.
5. ಶ್ರೀ. ಆರ್. ರಾಘವೇಂದ್ರ, ಕಂದಾಯ ವಸೂಲಿಗಾರರು
6. ಶ್ರೀ. ಗೋಪಿನಾಥ್, ಕೆಲಸ ಪರಿವೀಕ್ಷಕರು, ಬೆಂ.ನೀ.ಸ. & ಒ. ಮಂಡಳಿ.
7. ಹಾಗೂ ಸಾರ್ವಜನಿಕರು.

*********

1. ನೋಡಲ್ ಅಧಿಕಾರಿಯವರು ಮಾತನಾಡಿ ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡ ಕ್ರಮಗಳ ಕುರಿತು ಕಳೆದ ಸಭೆಯ ನಡವಳಿಗಳನ್ನು ಓದುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಅದರಂತೆ ವಾರ್ಡ್ ಅಭಿಯಂತರರು ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿ ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸಿದರು. ಅದರಂತೆ ಕಳೆದ ಸಭೆಯ ನಡವಳಿಗಳ ದೂರುಗಳನ್ನು ಪರಿಹರಿಸಲಾಗಿರುತ್ತದೆ.



Scanned with CamScanner

2. ವಾರ್ಡಿನ ಸ್ಥಳೀಯರಾದ ಶ್ರೀ. ಮಂಜುನಾಥ್ ಟಿ. ರವರು ಮಾತನಾಡಿ ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಬಿಡಾಡಿ ಹಸುಗಳು ಹೆಚ್ಚಾಗಿದ್ದು, ಸಾರ್ವಜನಿಕರು ಮತ್ತು ವಾಹನಗಳು ಓಡಾಡಲು ತೊಂದರೆಯಾಗಿರುವುದಾಗಿ ತಿಳಿಸುತ್ತಾ, ಬೇರೆ ಪ್ರದೇಶದಿಂದ ನಾಯಿಗಳನ್ನು ತಂದು ಇಲ್ಲಿ ಬಿಡುತ್ತಿದ್ದಾರೆ ಎಂದು ಮತ್ತೊಮ್ಮೆ ದೂರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಪಶು ಸಂಗೋಪನಾ ಇಲಾಖೆಯವರೊಂದಿಗೆ ದೂರವಾಣಿ ಮುಖಾಂತರ ಮಾತನಾಡಿ ಮತ್ತೊಮ್ಮೆ ಕ್ರಮ ವಹಿಸಲು ತಿಳಿಸಿದರು.

3. ವಾರ್ಡಿನ ಸ್ಥಳೀಯರಾದ ಶ್ರೀ. ಅಜ್ಮಲ್ ರವರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಸರಿಯಾದ ಸಮಯಕ್ಕೆ ವಿದ್ಯುತ್‌ಚ್ಛಕ್ತಿ ಸರಬರಾಜು ಮತ್ತು ಸದರಿ ವಾರ್ಡಿನ ರಸ್ತೆಗಳಾದ ಸೋಮೇಶ್ವರನಗರ, ಕೆ.ಎಂ. ಕಾಲೋನಿಗಳಲ್ಲಿ ಸುಮಾರು 10 ವಿದ್ಯುತ್ ಕಂಬಗಳು ಹಾಳಾಗಿದ್ದು, ಬದಲಿಸಿಕೊಡುವಂತೆ ಸಾಕಷ್ಟು ಬಾರಿ ಕೋರಿದ್ದರೂ ಸಹ ಈ ತಹಲ್‌ವರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಹಿಂದಿನ ಸಭೆಯಲ್ಲಿ ದೂರಿದ್ದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಹಿಂದಿನ ಸಭೆಯಲ್ಲಿ ನಿರ್ದೇಶನ ನೀಡಿರುವ ಮೇರೆಗೆ ಒಂದು ವಿದ್ಯುತ್ ಕಂಬವನ್ನು ಸರಿಪಡಿಸಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದ್ದು, ಹಾಗೂ ಈ ಸಭೆಯಲ್ಲಿ ಬೆಸ್ಕಾಂ ಇಲಾಖೆಯ ಗೈರು ಹಾಜರಾಗಿರುವುದರಿಂದ ಮುಂದಿನ ಸಭೆಯಲ್ಲಿ ಈ ವಿಷಯದ ಬಗ್ಗೆ ಚರ್ಚಿಸಲಾಗುವುದೆಂದು ತಿಳಿಸಿದರು.

4. ವಾರ್ಡಿನ ಸ್ಥಳೀಯರಾದ ಶ್ರೀ. ಸುಮಂತ್, ಶ್ರೀ. ಅಜ್ಮಲ್, ಶ್ರೀ. ಸುರೇಶ್, ಶ್ರೀ.ಮುರಳಿ ಹಾಗೂ ಶ್ರೀ.ಅಶೋಕ್ ರವರು ಮಾತನಾಡಿ ಮುರಳಿ ಕಾಲೋನಿಯಲ್ಲಿ ನಿರ್ಮಿಸಿದ ಆರ್.ಸಿ.ಸಿ ಚರಂಡಿಯ ಕಾಮಗಾರಿಯು ಅಪೂರ್ಣವಾಗಿರುವುದೆಂದು ತಿಳಿಸಿದರು ಹಾಗೂ ಸದರಿ ರಸ್ತೆಯು ಹಾಳಾಗಿರುವುದರಿಂದ ಸ್ಥಳೀಯರ ವಾಹನ ಸಂಚಾರಕ್ಕೆ ತೀವ್ರ ತರಹದ ತೊಂದರೆಯಾಗಿದೆ ಎಂದು ಹಿಂದಿನ ಸಭೆಯಲ್ಲಿ ಅಧ್ಯಕ್ಷರಿಗೆ ದೂರಿದ್ದರು. ಇದರನ್ವಯ ಅಧ್ಯಕ್ಷರು ಮಾತನಾಡಿ ಮಳೆಗಾಲ ಇರುವುದರಿಂದ ಮಳೆಗಾಲ ನಿಂತ ನಂತರ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ಸಭೆಯಲ್ಲಿ ತಿಳಿಸಿದರು.

5. ವಾರ್ಡಿನ ಸ್ಥಳೀಯರಾದ ಶ್ರೀ. ಸುಮಂತ್, ಹಾಗೂ ಶ್ರೀ.ಮುರಳಿ ರವರು ಮಾತನಾಡಿ ಸಿದ್ಧಾಪುರದ ಪೂಜಮ್ಮ ರಸ್ತೆಗೆ ನೀರು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸಿ ನಂತರ ರಸ್ತೆ ಅಭಿವೃದ್ಧಿಪಡಿಸಿಕೊಡಬೇಕೆಂದು ಮನವಿ ಮಾಡಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ಸದರಿ ರಸ್ತೆಯ ಬಗ್ಗೆ ಮಾನ್ಯ ಚಿಕ್ಕಪೇಟೆ ವಿಧಾನ ಸಭಾ ಕ್ಷೇತ್ರದ ಶಾಸಕರವರೊಂದಿಗೆ ಚರ್ಚಿಸಿ ಅನುದಾನ ಬಿಡುಗಡೆ ಆದ ನಂತರ ಸೂಕ್ತ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.



Scanned with CamScanner

6. ವಾರ್ಡಿನ ಸ್ಥಳೀಯರಾದ ಶ್ರೀ. ಅಶೋಕ್ ಜಿ. ರವರು ಮಾತನಾಡಿ ಪಳೇಕಮ್ಮ ದೇವಸ್ಥಾನದ ಹತ್ತಿರವಿರುವ ಖಾಲಿ ಜಾಗದ ವಿವರಗಳನ್ನು ಹಿಂದಿನ ಸಭೆಯಲ್ಲಿ ನೀಡಿದ್ದರೂ ಸಹ ಮತ್ತೊಮ್ಮೆ ವಿವರ ಕೇಳೀದ ಹಿನ್ನೆಲೆಯಲ್ಲಿ ಸಹಾಯಕ ಕಂದಾಯ ಅಧಿಕಾರಿಯವರ ಕಛೇರಿಯಲ್ಲಿ ಖುದ್ದಾಗಿ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳುವಂತೆ ಅಧ್ಯಕ್ಷರು ಶ್ರೀ. ಅಶೋಕ್‌ರವರಿಗೆ ತಿಳಿಸಿದರು.

7. ವಾರ್ಡಿನ ಸ್ಥಳೀಯರಾದ ಶ್ರೀ. ಸುರೇಶ್ ರವರು ಮಾತನಾಡಿ ಘನತ್ಯಾಜ್ಯ ಇಲಾಖೆಯ ಮಾರ್ಷಲ್ ರವರು ಸಣ್ಣ ವ್ಯಾಪಾರದ ಅಂಗಡಿಗಳಿಗೆ ಪ್ಲಾಸ್ಟಿಕ್ ಬ್ಯಾನ್ ಮಾಡಿ ದಂಡ ವಿಧಿಸುತ್ತಿರುವುದು ಕಂಡು ಬಂದಿದ್ದು, ಇದೇ ರೀತಿ ದೊಡ್ಡ ದೊಡ್ಡ ವ್ಯಾಪಾರ ಮಳಿಗೆಗಳಿಗೂ ಸಹ ಪ್ಲಾಸ್ಟಿಕ್ ಬ್ಯಾನ್ ಮಾಡಿ ದಂಡು ವಿಧಿಸಲು ಹಿಂದಿನ ಸಭೆಯಲ್ಲಿ ಕೋರಿದ್ದರ ಹಿನ್ನೆಲೆಯಲ್ಲಿ ಸಭೆಯಲ್ಲಿ ಚರ್ಚಿಸಿದಾಗ ಘನತ್ಯಾಜ್ಯ ನಿರ್ವಹಣೆ ಇಲಾಖೆಯ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಈ ಸಂಬಂಧ ದಂಡ ವಸೂಲಿ ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

8. ವಾರ್ಡಿನ ಸ್ಥಳೀಯರಾದ ಶ್ರೀ. ಸುರೇಶ್ ರವರು ಮಾತನಾಡಿ ಸೋಮೇಶ್ವರನಗರದ 1ನೇ ಅಡ್ಡರಸ್ತೆ, ನಿಮ್ಹಾನ್ಸ್ ಕಾಂಪೌಂಡ್ ಹತ್ತಿರ ನಿರ್ಮಿಸುತ್ತಿರುವ ಕುಡಿಯುವ ನೀರಿನ ಘಟಕದ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಕೋರಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ವಾರ್ಡಿನ ಅಭಿಯಂತರರಿಗೆ ಕೂಡಲೇ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

9. ವಾರ್ಡಿನ ಸ್ಥಳೀಯರಾದ ಶ್ರೀ. ಸುರೇಶ್ ರವರು ಮಾತನಾಡಿ ಸೋಮೇಶ್ವರನಗರದ 8ನೇ ಅಡ್ಡರಸ್ತೆಯ ಎದುರು ಸಾರ್ವಜನಿಕರು ಮೂತ್ರ ವಿಸರ್ಜನೆ ಮಾಡುತ್ತಿರುವುದರಿಂದ ಅಲ್ಲಿನ ಸ್ಥಳೀಯರಿಗೆ ಹಾಗೂ ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುವುದೆಂದು ದೂರಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ಘನತ್ಯಾಜ್ಯ ಇಲಾಖೆಯವರಿಗೆ ಕೂಡಲೇ ಕ್ರಮ ವಹಿಸಲು ಸೂಚಿಸಿದರು.

10. ವಾರ್ಡಿನ ಸ್ಥಳೀಯರಾದ ಶ್ರೀ. ಸುರೇಶ್ ರವರು ಮಾತನಾಡಿ ಗುಟ್ಟೇಪಾಳ್ಯ ಮತ್ತು ಅರೆಕೆಂಪನಹಳ್ಳಿಯಲ್ಲಿರುವ ಉದ್ಯಾನವನ್ನು ಸ್ವಚ್ಛಗೊಳಿಸಲು ಕೋರಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ತೋಟಗಾರಿಗೆ ಇಲಾಖೆಯವರೊಂದಿಗೆ ದೂರವಾಣಿಯ ಮೂಲಕ ಮಾತನಾಡಿ ಕೂಡಲೇ ಕ್ರಮ ವಹಿಸಲು ತಿಳಿಸಿದರು.



Scanned with CamScanner

11. ವಾರ್ಡಿನ ಸ್ಥಳೀಯರಾದ ಶ್ರೀ. ಜಯರಾಂ ಎಂ.ಜಿ. ರವರು ಮಾತನಾಡಿ 6ನೇ ಅಡ್ಡರಸ್ತೆಯಲ್ಲಿರುವ ಬೋರ್‌ವೆಲ್‌ಗೆ ಅಳವಡಿಸಿರುವ ಮುಚ್ಚಳವು ಹಾಳಾಗಿದ್ದು, ಸರಿಪಡಿಸಲು ಕೋರಿದರು. ಈ ಹಿನ್ನೆಲೆಯಲ್ಲಿ ಅಧ್ಯಕ್ಷರು ಮಾತನಾಡಿ ವಾರ್ಡಿನ ಅಭಿಯಂತರರಿಗೆ ಕೂಡಲೇ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

12. ವಾರ್ಡಿನ ಸ್ಥಳೀಯರಾದ ಶ್ರೀ. ಜಯರಾಂ ಎಂ.ಜಿ. ರವರು ಮಾತನಾಡಿ ರಾಘವೇಂದ್ರ ಕಾಲೋನಿ ಮತ್ತು ಗುಟ್ಟೇಪಾಳ್ಯದಲ್ಲಿ ಒಳಚರಂಡಿಯ ಚೇಂಬರ್‌ನ್ನು ಕೂಡಲೇ ಸ್ವಚ್ಛಗೊಳಿಸಿ ಡೆಬ್ರಿಸ್ ತೆರವುಗೊಳಿಸುವಂತೆ ಕೋರಿದರು. ಈ ಹಿನ್ನೆಲೆಯಲ್ಲಿ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಇಲಾಖೆಯ ಕೆಲಸ ಪರಿವೀಕ್ಷಕರಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಅಧ್ಯಕ್ಷರು ಸೂಚನೆ ನೀಡಿದರು.

13. ಶ್ರೀಮತಿ/ಕುಮಾರಿ. ಶಾಲಿನಿ, ಮಹಿಳಾ ಹೌಸಿಂಗ್ ಟ್ರಸ್ಟ್ ರವರು ಮಾತನಾಡಿ ಹೊಂಬೇಗೌಡ ಸ್ಲಂ ಪ್ರದೇಶದಲ್ಲಿ ಅಲ್ಲಿನ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ಕೋರಿದರು. ಈ ಹಿನ್ನೆಲೆಯಲ್ಲಿ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಮಾತನಾಡಿ ಸದರಿ ಸ್ಲಂನಲ್ಲಿ ಈಗಾಗಲೇ ಪಾಲಿಕೆ ವತಿಯಿಂದ ಹಾಗೂ ಕೊಳಚೆ ನಿರ್ಮೂಲನಾ ವತಿಯಿಂದ ಸಾಕಷ್ಟು ಅಭಿವೃದ್ಧಿಯಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು. ನಂತರ ಅಧ್ಯಕ್ಷರು ಮಾತನಾಡಿ ಹೊಂಬೇಗೌಡ ಸ್ಲಂ ಪ್ರದೇಶದಲ್ಲಿ ಸಾರ್ವಜನಿಕರಿಗೆ ಅವಶ್ಯವಿರುವ ಯಾವುದಾದರೂ ಅಬಿವೃದ್ಧಿ ಕಾಮಗಾರಿಯ ಬಗ್ಗೆ ತಿಳಿಸಿದ್ದಲ್ಲಿ, ಕ್ರಮ ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

14. ವಾರ್ಡಿನ ಸ್ಥಳೀಯರಾದ ಶ್ರೀ. ಇಂಮ್ತಿಯಾಜ್ ರವರು ಮಾತನಾಡಿ 7ನೇ ಮುಖ್ಯರಸ್ತೆಯಲ್ಲಿ ಚರಂಡಿಯಲ್ಲಿ ಹೂಳು ತುಂಬಿದ್ದು, ಸರಿಪಡಿಸುವಂತೆ ಕೋರಿದರು. ಈ ಬಗ್ಗೆ ಅಧ್ಯಕ್ಷರು ಮಾತನಾಡಿ ವಾರ್ಡ್ ಅಭಿಯಂತರರಿಗೆ ಕೂಡಲೇ ಕ್ರಮ ವಹಿಸುವಂತೆ ತಿಳಿಸಿದರು.

15. ಸಭೆಯಲ್ಲಿ ಅಧ್ಯಕ್ಷರು ಮಾತನಾಡಿ ಮಾನ್ಯ ವಿಶೇಷ ಆಯುಕ್ತರು (ಆಡಳಿತ/ಚುನಾವಣೆ) ರವರ ಕಛೇರಿ ಪತ್ರ ಸಂಖ್ಯೆ:ಇಎಲ್‌ಎನ್/ಕೇಂದ್ರ/ಪಿಆರ್/227/22-23, ದಿನಾಂಕ:02-09-2022 ರಲ್ಲಿ ಮಾಹೆಯಾನ ನಡೆಯುವ ವಾರ್ಡ್ ಕಮಿಟಿ ಸಭೆಗಳಲ್ಲಿ ಚುನಾವಣೆ ಸಂಬಂಧಿತ ಅಂಶಗಳನ್ನು ಸಹ ತಪ್ಪದೇ ಕಾರ್ಯಸೂಚಿಗಳಲ್ಲಿ ಸೇರ್ಪಡಿಸಿಕೊಂಡು ಚರ್ಚಿಸಿ ಕ್ರಮ ವಹಿಸುವಂತೆ ನಿರ್ದೇಶನ ನೀಡಿರುವುದಾಗಿ ತಿಳಿಸಿ ಸದರಿ ಪತ್ರದಲ್ಲಿರುವ ಅಂಶಗಳನ್ನು ಸಭೆಗೆ ತಿಳಿಸಿದರು. ಅಂಶಗಳ ವಿವರ ಈ ಕೆಳಕಂಡಂತಿವೆ.



Scanned with CamScanner

1. ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ಸಂಬಂಧ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯನ್ನು ಇನ್ನು 7 ದಿನಗಳವರೆಗೆ ವಿಸ್ತರಿಸಲಾಗಿರುವ ಕುರಿತು.
2. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಗುರುತಿನ ಚೀಟಿಗೆ ಆಧಾರ್ ಲಿಂಕ್ ಮಾಡುವ ಕುರಿತು (ನಮೂನೆ-6ಬಿ) ಮತ್ತು.
3. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯ ಚಟುವಟಿಕೆಗಳ ಕುರಿತು, ಸಭೆಯಲ್ಲಿ ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂದಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

Rknaim AE 3/9/22
ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

3/9/22
ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with CamScanner